ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಕೊಟ್ಟೂರು

ನಂ/ಕಂ/ಪ.ಬ./ನಾ.ಕ.ಕೊ/76/2015-16. ದಿನಾಂಕ:12-04-2016

| ಅರ್ಜಿದಾರರು | ತಕರಾರುದಾರರು |
|---|---|
| ಟಿ.ಎಂ.ಬಸಮ್ಮ ಗಂಡ ಲೇಟ್<br>ಟಿ.ಎಂ.ಸಿದ್ದಲಿಂಗಯ್ಯ<br>ಕಾಳಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 637ಪೈಕಿ ವಿಸ್ತೀರ್ಣ 3-00. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 637 ವಿಸ್ತೀರ್ಣ 3-00. ಎಕ್ರೆ ಜಮೀನನ್ನು ಸದರಿ ತಾಲೂಕು ಕಾಳಾಪುರ ಗ್ರಾಮದ ಟಿ.ಎಂ.ಬಸಮ್ಮ ಗಂಡ ಲೇಟ್ ಟಿ.ಎಂ.ಸಿದ್ದಲಿಂಗಯ್ಯ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಉಜ್ಜನಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 12-12-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಅರ್ಜಿದಾರರು ನಮೂನೆ-21 ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 49/2014-15. ದಿನಾಂಕ 13-01-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ: 17-11-2015 ರಿಂದ 12-04-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆಯ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಉಜ್ಜನಿ ಗ್ರಾಮದ ಸನಂ 637ಪೈಕಿ ವಿಸ್ತೀರ್ಣ 3-00. ಎಕ್ರೆ ಜಮೀನು ಅರ್ಜಿದಾರರ ಗಂಡನಾದ ಟಿ.ಎಂ.ಸಿದ್ದಲಿಂಗಯ್ಯ ತಂದೆ ಸಿದ್ದಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 17-02-2005 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಹಾಗೂ ಸದರಿ ಜಮೀನಿನ ಗ್ರಾಮಲೆಕ್ಕಿಗರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಒಪ್ಪಿ ನಮೂನೆ-21 ಕ್ಕೆ ಸಹಿ ಮಾಡಿಸಿ ವರದಿ ಸಲ್ಲಿಸಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**–:ಆದೇಶ:–**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 637ಪೈಕಿ ವಿಸ್ತೀರ್ಣ 3–00. ಎಕ್ರೆ ಜಮೀನನ್ನು ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಟಿ.ಎಂ.ಬಸಮ್ಮ ಗಂಡ ಲೇಟ್ ಟಿ.ಎಂ.ಸಿದ್ದಲಿಂಗಯ್ಯ ಕಾಳಾಪುರ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 12–04–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಟಿ.ಎಂ.ಬಸಮ್ಮ ಗಂಡ ಲೇಟ್ ಟಿ.ಎಂ.ಸಿದ್ದಲಿಂಗಯ್ಯ ಕಾಳಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎನ್. ನಾರಪ್ಪ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೊಟ್ಟೂರು ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.